ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ3/ಸಂ.ನ/2015-16

ಜ್ಞಾನಭಾರತಿ
ಬೆಂಗಳೂರು-560 056
ದಿನಾಂಕ:22-07-2015

## ಅಧಿಸೂಚನೆ

ವಿಷಯ : 2015-16ನೇ ಶೈಕ್ಷಣಿಕ ಸಾಲಿಗೆ ಸಂಯೋಜನೆ ನವೀಕರಿಸುವ ಬಗೆಗೆ.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ವಿಶ್ವವಿದ್ಯಾಲಯವು, 2015-16ನೇ ಸಾಲಿಗೆ ಬೆಂಗಳೂರಿನ ಶ್ರೀ ಭಗವಾನ್ ಮಹಾವೀರ್ ಜೈನ್ ಸಂಜೆ ಕಾಲೇಜು ನಡೆಸುತ್ತಿರುವ ಕೆಳಕಂಡ ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಸಂಯೋಜನೆಯನ್ನು ನವೀಕರಿಸಿ ಮುಂದುವರಿಸಿದೆ.

| ಕೋರ್ಸು | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಪಿ.ಜಿ. ಡಿಪ್ಲೊಮಾ ಇನ್ | ಹ್ಯೂಮನ್ ರಿಸೋರ್ಸ್ ಮ್ಯಾನೇಜ್‌ಮೆಂಟ್ | 40 (ನಲವತ್ತು) |
| | ಬಿಸಿನೆಸ್ ಅಡ್ಮಿನಿಸ್ಟ್ರೇಷನ್ | 40 (ನಲವತ್ತು) |
| | ಮಾರ್ಕೆಟಿಂಗ್ ಮ್ಯಾನೇಜ್‌ಮೆಂಟ್ | 30 (ಮೂವತ್ತು) |
| ಬಿ.ಕಾಂ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 370 (ಮುನ್ನೂರ ಎಪ್ಪತ್ತು) |

** ಪಿ.ಜಿ. ಡಿಪ್ಲೊಮಾ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ, ಸ್ಥಳೀಯ ವಿಚಾರಣಾ ಸಮಿತಿ ಮತ್ತು ವಿದ್ಯಾವಿಷಯಕ ಪರಿಷತ್ತು ಶಿಫಾರಸ್ಸು ಮಾಡಿರುವುದಿಲ್ಲ. ಆದರೂ ದಿ:04-03-2015ರ ಸಿಂಡಿಕೇಟ್ ಸಭೆಯ ನಿರ್ಣಯದಂತೆ, ಸಂಯೋಜನಾ ನವೀಕರಣವನ್ನು ನೀಡಲಾಗಿದೆ. ಕಾಲೇಜು, ಸದರಿ ಕೋರ್ಸಿನ ಬಗ್ಗೆ ಇರುವ ನ್ಯೂನ್ಯತೆಗಳನ್ನು ಆದ್ಯತೆ ಮೇರೆಗೆ ಸರಿಪಡಿಸಿಕೊಳ್ಳತಕ್ಕದ್ದು ಮತ್ತು ಈ ಬಗ್ಗೆ ವಿಶ್ವವಿದ್ಯಾಲಯಕ್ಕೆ ಪಾಲನಾ ವರದಿಯನ್ನು ಸಲ್ಲಿಸತಕ್ಕದ್ದು. ಇಲ್ಲವಾದಲ್ಲಿ ಸದರಿ ಕೋರ್ಸುಗಳ ಸಂಯೋಜನೆಯನ್ನು ರದ್ದುಪಡಿಸಲು ಕ್ರಮ ಜರುಗಿಸಲಾಗುವುದು.*

---

**ವಿ.ಸೂ:** *2015-16ನೇ ಸಾಲಿನ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನು ಲಗತ್ತಿಸಿದೆ. ಕಾಲೇಜುಗಳಿಗೆ ಸಿಂಡಿಕೇಟು ನಿಗಧಿಪಡಿಸಿದ ವಿದ್ಯಾರ್ಥಿ ಪ್ರಮಾಣದೊಂದಿಗೆ ಮಾತ್ರ ಸಂಯೋಜನೆಯನ್ನು ನವೀಕರಿಸಲಾಗಿದೆ. ಕಾಲೇಜು 15 ದಿನಗಳ ಒಳಗಾಗಿ ಸ್ಥಳೀಯ ವಿಚಾರಣಾ ಸಮಿತಿಯ ವರದಿಯಲ್ಲಿ ನಮೂದಿಸಿರುವ ಕೊರತೆಗಳನ್ನು ಸರಿದೂಗಿಸಿಕೊಂಡು ಉತ್ತಮ ಪಡಿಸಿಕೊಂಡಿರುವ ಬಗ್ಗೆ ಹಾಗೂ ನ್ಯೂನ್ಯತೆಗಳನ್ನು ಸರಿಪಡಿಸಿಕೊಂಡಿರುವ ಕುರಿತು ಅನುಸರಣಾ ವರದಿಯನ್ನು ನೀಡತಕ್ಕದ್ದು. ಇಲ್ಲವಾದಲ್ಲಿ ಮುಂದಿನ ಶೈಕ್ಷಣಿಕ ವರ್ಷದ ಸಂಯೋಜನಾ ನವೀಕರಣದ ಅರ್ಜಿಯನ್ನು ಸ್ವೀಕರಿಸಲಾಗುವುದಿಲ್ಲ.*

---

**ಷರತ್ತುಗಳು:**

1. ಸ್ಥಳೀಯ ವಿಚಾರಣಾ ಸಮಿತಿಯು ನಮೂದಿಸಿರುವ ಷರತ್ತುಗಳನ್ನು ಪಾಲಿಸತಕ್ಕದ್ದು.
2. ನಿಗಧಿತ ವಿದ್ಯಾರ್ಥಿ ಪ್ರವೇಶ ಪ್ರಮಾಣವನ್ನು ಮೀರಿದ್ದಲ್ಲಿ ಹೆಚ್ಚುವರಿ ಪ್ರವೇಶ ಪ್ರಮಾಣಕ್ಕೆ ವಿಶ್ವವಿದ್ಯಾಲಯ ಅಂಗೀಕಾರ ನೀಡುವುದಿಲ್ಲ.
3. ಯಾವುದೇ ಕೋರ್ಸಿಗೆ/ಕೋರ್ಸುಗಳಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
4. *ಸದರಿ ಪದವಿ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.*
5. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

..2..

6. ಸ್ನಾತಕೋತ್ತರ ಪದವಿ ಕೋರ್ಸುಗಳಿಗೆ ವಿಶ್ವವಿದ್ಯಾಲಯ ಕಾಲಕಾಲಕ್ಕೆ ನಿಗದಿಪಡಿಸುವ ಪ್ರವೇಶ ಮತ್ತು ಇತರೇ ಶುಲ್ಕಗಳನ್ನು ಮೀರದಂತೆ, ನಿಗದಿಪಡಿಸಿದ ವಿದ್ಯಾರ್ಥಿ ಪ್ರಮಾಣದ ಶೇಕಡಾ 50ರಂತೆ (ಸರ್ಕಾರಿ ಕಾಲೇಜುಗಳಿಗೆ ಶೇಕಡಾ 100ರಂತೆ) ವಿಶ್ವವಿದ್ಯಾಲಯವು ಪ್ರಾಯೋಜಿಸುವ ವಿದ್ಯಾರ್ಥಿಗಳಿಂದ ಪ್ರವೇಶವನ್ನು ಮಾಡಿಸಿಕೊಳ್ಳತಕ್ಕದ್ದು.

7. ವೈಶಾಕ v/s ರಾಜಸ್ಥಾನದ ರಾಜ್ಯ ಸರ್ಕಾರದ ಪ್ರಾಕ್ಟಕ್ಕೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿಯಿಂದ(ಬೋಧಕ/ಬೋಧಕೇತರ/ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕುಳ, ಲೈಂಗಿಕ ಕಿರುಕುಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾಧಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು.

8. ವಿದ್ಯಾರ್ಥಿಗಳನ್ನು ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಕಾಲೇಜು ಕೋರ್ಸುಗಳ ಶಿಕ್ಷಣ ಕ್ರಮವನ್ನು ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು ಹಾಗೂ ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ಆಡಳಿತಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.

9. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು 'ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.

10. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.

11. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.

12. ಆಡಳಿತ ವ್ಯವಹಾರದಲ್ಲಿ ಕನ್ನಡವನ್ನು ಕಡ್ಡಾಯವಾಗಿ ಬಳಸತಕ್ಕದ್ದು.

13. 2016-17ನೇ ಸಾಲಿಗೆ ಕೋರ್ಸುಗಳ ಸಂಯೋಜನಾ ನವೀಕರಣಕ್ಕೆ ಕಾಲೇಜು ತಪ್ಪದೆ ಅರ್ಜಿಯನ್ನು ಸಲ್ಲಿಸತಕ್ಕದ್ದು.

14. *ಐದು ವರ್ಷಗಳನ್ನು ಪೂರೈಸಿರುವ ಕಾಲೇಜುಗಳು ನ್ಯಾಕ್(NAAC) ಅನುಮೋದನೆಯನ್ನು ಕೂಡಲೇ ಪಡೆದುಕೊಳ್ಳತಕ್ಕದ್ದು.*

15. ಪ್ರಾಂಶುಪಾಲರು, ಮೌಲ್ಯಮಾಪನ ಕಾರ್ಯಕ್ಕಾಗಿ ಅರ್ಹ ಶಿಕ್ಷಕರ ಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿಗಳ ಅಧ್ಯಕ್ಷರುಗಳಿಗೆ ತಪ್ಪದೇ ಸಲ್ಲಿಸತಕ್ಕದ್ದು. ತಪ್ಪಿದ್ದಲ್ಲಿ ಕಾಲೇಜಿನ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

ಆಜ್ಞೆ ಮೇರೆಗೆ

K.K.Sathin

ಕುಲಸಚಿವರು

ಗೆ,

ಪ್ರಾಂಶುಪಾಲರು,
ಶ್ರೀ ಭಗವಾನ್ ಮಹಾವೀರ್ ಜೈನ್ ಸಂಜೆ ಕಾಲೇಜು,
ಡಾ|| ಅ.ನ.ಕೃಷ್ಣರಾವ್ ರಸ್ತೆ, ವಿಶ್ವೇಶ್ವರಪುರಂ,
ಬೆಂಗಳೂರು 560 004.

ಪ್ರತಿಗಳು:

1) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ(ವಿಶ್ವ ವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು-1.
2) ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-1.
3) ಕುಲಸಚಿವರು (ಮೌಲ್ಯಮಾಪನ), ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-56/
4) ಉಪಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು ಶೈಕ್ಷಣಿಕ ವಿಭಾಗ-1/4, ಬೆಂ. ವಿ. ಬೆಂಗಳೂರು-56
5) ಅಧೀಕ್ಷಕರು, ಕಾನ್ಫಿಡೆನ್ಷಿಯಲ್ ವಿಭಾಗ, ಪರೀಕ್ಷಾ ವಿಭಾಗ, ಬೆಂ.ವಿ.ವಿ., ಬೆಂಗಳೂರು-56
6) ಸಹಾಯಕ ನಿರ್ದೇಶಕರು, ಆಂಕಿ ಅಂಶಗಳ ವಿಭಾಗ, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು-1 [Aca-Aa-1-2015-16]

...ಸಿಪಿ-ಪ್ರ: ಎ3: ಸಂಯೋಜನೆ: 2000-2001:

# ಬೆಂಗಳೂರು ವಿಶ್ವವಿದ್ಯಾಲಯ

ಜ್ಞಾನ ಭಾರತಿ
ಬೆಂಗಳೂರು-56
ದಿನಾಂಕ: 17-10-2000

## ಅಧಿಸೂಚನೆ

ವಿಷಯ: ಬೆಂಗಳೂರಿನ ವಿಶ್ವೇಶ್ವರಪುರಂನ ಶ್ರೀ ಭಗವಾನ ಮಹಾವೀರ ಜೈನ ಸಂಜೆ ಕಾಲೇಜಿಗೆ ಹೊಸ ಸಂಯೋಜನೆ ನೀಡುವುದರ ಬಗ್ಗೆ

ಉಲ್ಲೇಖ: 1) ಸರ್ಕಾರದ ಆದೇಶ ಸಂಖ್ಯೆ ಇಡಿ 177 ಯುಯುಬಿ 2000 ದಿನಾಂಕ 26-8-2000
2) ಕುಲಪತಿಗಳ ಆದೇಶ ದಿನಾಂಕ 12-10-2000

—

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 1976ರ (ಕರ್ನಾಟಕ ಅಧಿನಿಯಮ 28, 1976)ರ ಕಲಂ 53(3)ರ ಉಪ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ವಯ ಬೆಂಗಳೂರು ವಿಶ್ವವಿದ್ಯಾಲಯದಿಂದ 2000-2001ನೇ ಸಾಲಿನಿಂದ ಜಾರಿಗೆ ಬರುವಂತೆ ಬೆಂಗಳೂರಿನ ಶ್ರೀ ಭಗವಾನ ಮಹಾವೀರ ಜೈನ ಸಂಜೆ ಕಾಲೇಜಿಗೆ ಈ ಕೆಳಗೆ ನಮೂದಿಸಿರುವ ಕೋರ್ಸುಗಳನ್ನು ಪ್ರಾರಂಭಿಸಲು ಈ ಕೆಳಕಂಡ ಷರತ್ತುಗೊಳಪಟ್ಟು ಸಂಯೋಜನೆ ಮಂಜೂರಾತಿಯನ್ನು ನೀಡಿದೆ.

| ಕೋರ್ಸ್ | ವಿಷಯಗಳು | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ ಕಾಂ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 80(ಎಂಬತ್ತು) |
| ಪಿ ಜಿ ಡಿಪ್ಲಮೊ ಇನ್ ಪರ್ಸನಲ್ ಮ್ಯಾನೇಜ್‌ಮೆಂಟ್ | | 30(ಮೂವತ್ತು) |
| ಪಿ ಜಿ ಡಿಪ್ಲಮೊ ಇನ್ ಬಿಸಿನೆಸ್ ಅಡ್ಮಿನಿಸ್ಟ್ರೇಷನ್ | | 30(ಮೂವತ್ತು) |
| ಪಿ ಜಿ ಡಿಪ್ಲಮೊ ಇನ್ ಮಾರ್ಕೆಟಿಂಗ್ ಮ್ಯಾನೇಜ್‌ಮೆಂಟ್ | | 30(ಮೂವತ್ತು) |

...ು: 1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಮೇಲ್ಕಂಡ ಕಾಲೇಜಿಗೆ ಯಾವುದೇ ಕಾಲಕ್ಕೂ ಅನುದಾನ ಮಂಜೂರು ಮಾಡುವುದಿಲ್ಲ ಮತ್ತು ಶಾಶ್ವತ ಅನುದಾನರಹಿತ ಕಾಲೇಜು ಎಂದು ಪರಿಗಣಿಸತಕ್ಕದ್ದು

2) ಪ್ರಸಕ್ತ ಶಾಶ್ವತ ಅನುದಾನರಹಿತ ಷರತ್ತಿಗೆ ಒಳಪಡಲು ಕಾಲೇಜು ದಿನಾಂಕ 10-8-2000ರಂದು ಬರೆದುಕೊ ಬರೆದುಕೊಟ್ಟಿರುವ ಮಧ್ಯಂತರ ಒಪ್ಪಂದದಲ್ಲಿನ ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು

3) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು

4) ಸ್ಥಳೀಯ ಪರಿಶೀಲನಾ ಸಮಿತಿಯು ವಿಧಿಸಿರುವ ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

5) ಸದರಿ ಪದವಿ ಕೋರ್ಸ್‌ಗೆ ವಿದ್ಯಾರ್ಥಿಗಳಿಗೆ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಆಜ್ಞೆ ಮೇರೆಗೆ

ಕುಲಸಚಿವರು
17/X/2000

ಗೆ
ಅಧ್ಯಕ್ಷರು,
ಶ್ರೀ ಭಗವಾನ ಮಹಾವೀರ ಜೈನ್ ಎಜುಕೇಷನಲ್ ಟ್ರಸ್ಟ
ಡಾ. ಎಂ ಎಸ ಕೃಷ್ಣರಾವ್ ರಸ್ತೆ, ವಿಶ್ವೇಶ್ವರಪುರಂ
ಬೆಂಗಳೂರು -4

ಪ್ರಾಂಶುಪಾಲರು
ಶ್ರೀ ಭಗವಾನ ಮಹಾವೀರ ಜೈನ ಸಂಜೆ ಕಾಲೇಜು
ಡಾ. ಎ ಎನ ಕೃಷ್ಣರಾವ್ ರಸ್ತೆ,
ವಿಶ್ವೇಶ್ವರಪುರಂ, ಬೆಂಗಳೂರು-4

ಪ್ರತಿಗಳು:
1) ಕಾರ್ಯದರ್ಶಿಯವರು ವಿದ್ಯಾ ಇಲಾಖೆ ಕರ್ನಾಟಕ ಸರ್ಕಾರ ಬಹುಮಹಡಿ ಕಟ್ಟಡ ಬೆಂಗಳೂರು-1
2) ನಿರ್ದೇಶಕರು ಕಾಲೇಜು ಶಿಕ್ಷಣ ನಿರ್ದೇಶಕರ ಕಛೇರಿ ಬೆಂಗಳೂರು-1
3) ನಿರ್ದೇಶಕರು ಕಾಲೇಜು ಅಭಿವೃದ್ಧಿ ಮಂಡಳಿ ಬೆಂಗಳೂರು-1
4) ಕುಲಸಚಿವರು (ಮೌಲ್ಯಮಾಪನ) ಬೆಂ ವಿ ಬೆಂಗಳೂರು-1
5) ಉಪಕುಲಸಚಿವರು : ಅಧೀಕ್ಷಕರು ಶೈಕ್ಷಣಿಕ ವಿಭಾಗ-1 ಬೆಂ.ವಿ ಬೆಂಗಳೂರು-56

—

ಕರ್ನಾಟಕ ಸರ್ಕಾರ

[illegible] 177 ಯುಜಿಸಿ 2000

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ 26-08-2000.

ಇಂದ :
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ, ಬೆಂಗಳೂರು-560 001.

ಇವರಿಗೆ:

ಕುಲಸಚಿವರು,
ಬೆಂಗಳೂರು ವಿಶ್ವವಿದ್ಯಾಲಯ,
ಬೆಂಗಳೂರು-560 056.

ಮಾನ್ಯರೇ,

ವಿಷಯ:- ಬೆಂಗಳೂರಿನ ವಿಶ್ವೇಶ್ವರಪುರಂನ ಶ್ರೀ ಭಗವಾನ ಮಹಾವೀರ ಜೈನ ಸಂಜೆ ಕಾಲೇಜಿಗೆ ಸಂಯೋಜನೆ.

ಉಲ್ಲೇಖ:- (1) ದಿ: 5-5-2000 ನಂ:ಎಸಿಎ 3 ಸಪಸ ಹೊಕಾಪ್ರ 2000-2001ರ ನಿಮ್ಮ ಪತ್ರ.
(2) ದಿ: 8-8-2000ದ ಬೆಂಗಳೂರಿನ ಶ್ರೀ ಭಗವಾನ ಮಹಾವೀರ ಜೈನ ಎಜುಕೇಷನಲ್ ಟ್ರಸ್ಟಿನ ಪತ್ರ.

1) ಬೆಂಗಳೂರಿನ ಶ್ರೀ ಭಗವಾನ ಮಹಾವೀರ ಜೈನ ಎಜುಕೇಷನಲ್ ಟ್ರಸ್ಟ್ ಪ್ರಸಕ್ತ 2000-2001ನೇ ಸಾಲಿನಿಂದ ವಿಶ್ವೇಶ್ವರಪುರಂನಲ್ಲಿ ಸ್ಥಾಪಿಸಲು ಉದ್ದೇಶಿಸಿರುವ ಶ್ರೀ ಭಗವಾನ ಮಹಾವೀರ ಜೈನ ಸಂಜೆ ಕಾಲೇಜಿಗೆ ಬಿ.ಕಾಂ ಮತ್ತು ಪಿ ಜಿ ಡಿಪ್ಲೋಮೋ ಕೋರ್ಸ್‌ಗಳೊಂದಿಗೆ ಸಂಯೋಜನೆ ಮಂಜೂರು ಮಾಡುವ ಪ್ರಸ್ತಾವನೆಯನ್ನು ನಿಮ್ಮ ವಿಶ್ವವಿದ್ಯಾಲಯದ ಸ್ಥಳೀಯ ವಿಚಾರಣಾ ಸಮಿತಿಯ ವರದಿಯನ್ನಾಧರಿಸಿ ಶೈಕ್ಷಣಿಕ ಪರಿಷತ್ತಿನ ಸಮಾಲೋಚನೆಯೊಂದಿಗೆ ಸಿಂಡಿಕೇಟು ಮಾಡಿರುವ ಶಿಫಾರಸ್ಸಿನ ಬೆಳಕಿನಲ್ಲಿ ಸಂವೀಕ್ಷಿಸಲಾಗಿದೆ.

2) 1976ರ ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮದ 53ನೇ ಪ್ರಕರಣದ (5)ನೇ ಉಪ ಪ್ರಕರಣದಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮೇಲ್ಕಂಡ ಕಾಲೇಜಿಗೆ ಈ ಕೆಳಕಂಡ ಕೋರ್ಸ್‌ಗಳೊಂದಿಗೆ ಅವುಗಳ ಮುಂದೆ ಸೂಚಿಸಲಾಗಿರುವ ವಿಷಯಗಳು ಮತ್ತು ವಿದ್ಯಾರ್ಥಿ ಪ್ರಮಾಣದೊಂದಿಗೆ ಪ್ರಸಕ್ತ 2000-2001ನೇ ಸಾಲಿನಿಂದ ಜಾರಿಗೆ ಬರುವಂತೆ ಸಂಯೋಜನೆಯನ್ನು ಮಂಜೂರು ಮಾಡುವಂತೆ ಶಿಫಾರಸ್ಸು ಮಾಡಲಾಗಿದೆ.

| ಕ್ರಮ ಸಂಖ್ಯೆ | ಕೋರ್ಸ್ | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|---|
| 1. | ಬಿ.ಕಾಂ | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 80 (ಎಂಬತ್ತು) |
| 2. | ಪಿ ಜಿ ಡಿಪ್ಲೋಮೊ ಇನ್ ಪರ್ಸನಲ್ ಮ್ಯಾನೇಜ್‌ಮೆಂಟ್ | -"- | 30 (ಮೂವತ್ತು) |
| 3. | ಪಿ ಜಿ ಡಿಪ್ಲೋಮೊ ಇನ್ ಬಿಸಿನೆಸ್ ಅಡ್ಮಿನಿಸ್ಟ್ರೇಷನ್ | -"- | 30 (ಮೂವತ್ತು) |
| 4. | ಪಿ ಜಿ ಡಿಪ್ಲೋಮೊ ಇನ್ ಮಾರ್ಕೆಟಿಂಗ್ ಮ್ಯಾನೇಜ್‌ಮೆಂಟ್ | -"- | 30 (ಮೂವತ್ತು) |

3) ಮೇಲ್ಕಂಡ ಸಂಯೋಜನೆಯು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟಿರುತ್ತದೆ.

ಷರತ್ತುಗಳು:

(1) ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಸಹ ಮೇಲ್ಕಂಡ ಕಾಲೇಜಿಗೆ ಯಾವುದೇ ಕಾಲಕ್ಕೂ ಅನುದಾನ ಮಂಜೂರು ಮಾಡುವುದಿಲ್ಲ ಮತ್ತು ಶಾಶ್ವತ ಅನುದಾನರಹಿತ ಕಾಲೇಜು ಎಂದು ಪರಿಗಣಿಸತಕ್ಕದ್ದು ;
(2) ಪ್ರಸಕ್ತ ಶಾಶ್ವತ ಅನುದಾನರಹಿತ ಷರತ್ತಿಗೆ ಒಳಪಡಲು ಕಾಲೇಜು ದಿನಾಂಕ 10-08-2000ರಂದು ಬರೆದುಕೊಟ್ಟಿರುವ ಮಧ್ಯಂತರ ಒಪ್ಪಂದದಲ್ಲಿನ ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ;
(3) ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ;
(4) ಸ್ಥಳೀಯ ಪರಿಶೀಲನಾ ಸಮಿತಿಯು ವಿಧಿಸಿರುವ ಷರತ್ತುಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

4) ಎಂಟು ದಿನಗಳಲ್ಲಿ ಅಧಿಸೂಚನೆಯನ್ನು ಹೊರಡಿಸಿ ಕಳುಹಿಸಲು ವಿನಂತಿ.

ತಮ್ಮ ನಂಬುಗೆಯ,

(ಎನ್. ನಾಗರಾಜು)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ವಿಶ್ವವಿದ್ಯಾಲಯ)

ಪ್ರತಿ ಇವರಿಗೆ:

(1) ಕಾಲೇಜು ಶಿಕ್ಷಣ ಆಯುಕ್ತರು : ನಿರ್ದೇಶಕರು, ಬೆಂಗಳೂರು-560 001.
(2) ಸರ್ಕಾರದ ಅಧೀನ ಕಾರ್ಯದರ್ಶಿ, ಶಿಕ್ಷಣ ಇಲಾಖೆ (ಕಾಲೇಜು ಶಿಕ್ಷಣ).
(3) ಪ್ರಾದೇಶಿಕ ಕಾಲೇಜು ಶಿಕ್ಷಣ ಜಂಟಿ ನಿರ್ದೇಶಕರು, ಗಾಂಧಿನಗರ ಬೆಂಗಳೂರು-560 009.
(4) ಅಧ್ಯಕ್ಷರು, ಶ್ರೀ ಭಗವಾನ ಮಹಾವೀರ ಜೈನ ಎಜುಕೇಷನಲ್ ಟ್ರಸ್ಟ್, ಡಾ:ಎ.ಎನ್.ಕೃಷ್ಣರಾವ್ ರಸ್ತೆ, ವಿಶ್ವೇಶ್ವರಪುರಂ, ಬೆಂಗಳೂರು-560 004.
(5) ಪ್ರಾಂಶುಪಾಲರು, ಶ್ರೀ ಭಗವಾನ ಮಹಾವೀರ ಜೈನ ಸಂಜೆ ಕಾಲೇಜು, ಡಾ: ಎ.ಎನ್.ಕೃಷ್ಣರಾವ್ ರಸ್ತೆ, ವಿಶ್ವೇಶ್ವರಪುರಂ, ಬೆಂಗಳೂರು-560 004.